### ಅಂತಾರಾಷ್ಟ್ರೀಯ ಕರಾವಳಿ ಸ್ವಚ್ಛತಾ ದಿನಾಚರಣೆ | ಕಡಲ ತೀರಗಳಲ್ಲಿ ಹೆಚ್ಚುತ್ತಿರುವ ಮಾಲಿನ್ಯದ ಬಗ್ಗೆ ಕಳವಳ

# ದ.ಕ., ಉಡುಪಿಯ ಬೀಚ್‌ಗಳಲ್ಲಿ ಸ್ವಚ್ಛತಾ ಕಾರ್ಯ

**ಮಂಗಳೂರು/ಉಡುಪಿ/ ಗಂಗೊಳ್ಳಿ:** ಅಂತಾರಾಷ್ಟ್ರೀಯ ಕರಾವಳಿ ಸ್ವಚ್ಛತಾ ದಿನದ ಅಂಗವಾಗಿ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯ ವಿವಿಧೆಡೆ ಬೀಚ್ ಸ್ವಚ್ಛತಾ ಕಾರ್ಯವನ್ನು ನಡೆಸಲಾಗಿತ್ತು.

ಸುರತ್ಕಲ್‌ನ ಬೀಚ್‌ನಲ್ಲಿ 'ಸ್ವಚ್ಛ ಭಾರತಕ್ಕಾಗಿ ಎನ್ ಐಟಿಕೆ' ಉಪಕ್ರಮ ಅಂಗವಾಗಿ ಸ್ವಚ್ಛತಾ ಕಾರ್ಯ ಭಾನುವಾರ ಆರಂಭಗೊಂಡಿತು. ಭಾರತ ಸರ್ಕಾರವು ಸ್ವಚ್ಛತೆ ಮತ್ತು ಪರಿಸರ ಸುಸ್ಥಿರತೆ ಹಿನ್ನೆಲೆಯಲ್ಲಿ 'ಸ್ವಭಾವ ಸ್ವಚ್ಛತಾ, ಸಂಸ್ಕಾರ ಸ್ವಚ್ಛತಾ' ಎಂಬ ವಿಷಯದೊಂದಿಗೆ ಸ್ವಚ್ಛತಾ ಹಿ ಸೇವಾ ಅಭಿಯಾನವನ್ನು ಪ್ರಾರಂಭಿಸಿದೆ. ಅಂತಾರಾಷ್ಟ್ರೀಯ ಕರಾವಳಿ ಸ್ವಚ್ಛತಾ ದಿನದ ಜತೆಗೆ, ಎನ್‌ಐಟಿಕೆ ಸುರತ್ಕಲ್ ತನ್ನ ಬೀಚ್ ಕ್ಲೀನಿಂಗ್ ಡ್ರೈವ್‌ನ್ನು ಸ್ವಚ್ಛತಾ ಹಿ ಸೇವಾ 2024 ಅಭಿಯಾನದ ಭಾಗವಾಗಿ ಪ್ರಾರಂಭಿಸಿತು.

ಎನ್‌ಐಟಿಕೆ ಬೀಚ್‌ನಲ್ಲಿ ಭಾನುವಾರ ಬೀಚ್ ಕ್ಲೀನಿಂಗ್ ಡ್ರೈವ್ ಆಯೋಜಿಸಲಾಯಿತು. ಇದರಲ್ಲಿ ಸ್ಥಳೀಯ ಎನ್‌ಜಿಒಗಳು, ಎನ್‌ಐಟಿಕೆ ಸೇವಾದಳ, ಎನ್‌ಐಟಿಕೆ ಎನ್‌ಸಿಸಿ ಕೆಡೆಟ್‌ಗಳು, ಎನ್‌ಎಸ್‌ಎಸ್ ಸ್ವಯಂಸೇವಕರು, ಅಧ್ಯಾಪಕರು, ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಸೇರಿದಂತೆ 300 ಕ್ಕೂ ಹೆಚ್ಚು ಮಂದಿ ಭಾಗವಹಿಸಿದ್ದರು. ಈ ವೇಳೆ ಸಾಮೂಹಿಕವಾಗಿ ಹಿಂದಿ, ಕನ್ನಡ ಮತ್ತು ಇಂಗ್ಲಿಷ್‌ನಲ್ಲಿ ಸ್ವಚ್ಛತಾ ಪ್ರತಿಜ್ಞೆ ಬೋಧಿಸಲಾಯಿತು.

ಸ್ವಚ್ಛತಾ ಪ್ರತಿಜ್ಞೆ ಬೋಧನೆ






**ಉಡುಪಿ ಜಿಲ್ಲಾಧಿಕಾರಿಯಿಂದ ಸಸಿ ನಾಟಿ**

ಕುಂದಾಪುರ ತಾಲೂಕಿನ ಕೋಡಿ ಸಮುದ್ರ ತೀರದಲ್ಲಿ ಅಂತಾರಾಷ್ಟ್ರೀಯ ಕಡಲ ತೀರ ಸ್ವಚ್ಛತಾ ದಿನದ ಅಂಗವಾಗಿ ಜಿಲ್ಲಾಡಳಿತ, ಅರಣ್ಯ ಇಲಾಖೆ, ಪರಿಸರ ಇಲಾಖೆ ಮತ್ತು ಕುಂದಾಪುರ ಪುರಸಭೆ ಆಶ್ರಯದಲ್ಲಿ ನಡೆದ ಕಡಲ ತೀರ ಸ್ವಚ್ಛತಾ ದಿನ ಕಾರ್ಯಕ್ರಮಕ್ಕೆ ಉಡುಪಿ ಜಿಲ್ಲಾಧಿಕಾರಿ ಡಾ.ಕೆ. ವಿದ್ಯಾಕುಮಾರಿ ಸಸಿ ನೆಡುವ ಮೂಲಕ ಚಾಲನೆ ನೀಡಿದರು.

ಬಳಿಕ ಮಾತನಾಡಿದ ಅವರು, ಕಡಲ ತೀರದಲ್ಲಿ ಹೆಚ್ಚುತ್ತಿರುವ ಮಾಲಿನ್ಯದಿಂದಾಗಿ ಜಲಚರಗಳ ಅಸ್ತಿತ್ವಕ್ಕೆ ತೊಂದರೆಯಾಗುತ್ತಿದೆ. ಈ ಕುರಿತು ಅರಿವು ಮೂಡಿಸುವ ನಿಟ್ಟಿನಲ್ಲಿ ಕಡಲ ತೀರ ಸ್ವಚ್ಛತಾ ದಿನ ಆಚರಿಸಲಾಗುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ಕೇಂದ್ರ ಸರಕಾರದ ಪ್ರತಿನಿಧಿ ಅಮೃತಾ ಗುಪ್ತಾ, ಪರಿಸರ ಇಲಾಖೆಯ ಪ್ರಾದೇಶಿಕ ನಿರ್ದೇಶಕ ರಂಗಸ್ವಾಮಿ, ಸಾಮಾಜಿಕ ಅರಣ್ಯದ ಅರಣ್ಯಾಧಿಕಾರಿ ರವೀಂದ್ರನಾಥ್ ಹಾಗೂ ಕುಂದಾಪುರ ಪುರಸಭೆಯ ಕಾರ್ಯ ನಿರ್ವಹಣಾಧಿಕಾರಿ ಆನಂದ, ಕುಂದಾಪುರ ಪುರಸಭೆಯ ಅಧಿಕಾರಿಗಳು ಹಾಗೂ ಸ್ವಚ್ಛತಾ ಸಿಬ್ಬಂದಿ, ಅರಣ್ಯ ಇಲಾಖೆ ಸಿಬ್ಬಂದಿ, ಪರಿಸರ ಇಲಾಖೆ ಹಾಗೂ ಬಿ.ಬಿ.ಹೆಗ್ಡೆ ಕಾಲೇಜಿನ ವಿದ್ಯಾರ್ಥಿಗಳು ಹಾಗೂ ಎನ್.ಎಸ್.ಎಸ್. ವಿದ್ಯಾರ್ಥಿಗಳು ಭಾಗವಹಿಸಿದ್ದರು.

**ತ್ರಾಸಿ-ಮರವಂತೆ ಬೀಚ್ ಸ್ವಚ್ಛತಾ ಕಾರ್ಯ**

ಅಂತಾರಾಷ್ಟ್ರೀಯ ಕಡಲ ತೀರ ಸ್ವಚ್ಛತಾ ದಿನದ ಅಂಗವಾಗಿ ಗಂಗೊಳ್ಳಿ ಕರಾವಳಿ ಕಾವಲು ಪೊಲೀಸ್ ಠಾಣೆ, ಗ್ರಾಮ ಪಂಚಾಯತ್ ತ್ರಾಸಿ ಹಾಗೂ ಲಯನ್ಸ್ ಕ್ಲಬ್ ತ್ರಾಸಿ-ಗಂಗೊಳ್ಳಿ, ಖಾರ್ವಿ ಆನ್‌ಲೈನ್. ಕಾಮ್ ಜಂಟಿ ಆಶ್ರಯದಲ್ಲಿ ತ್ರಾಸಿ-ಮರವಂತೆ ಬೀಚ್ ಸ್ವಚ್ಛತಾ ಕಾರ್ಯಕ್ರಮ ಭಾನುವಾರ ನಡೆಯಿತು.

ಈ ಸಂದರ್ಭ ಕರಾವಳಿ ಕಾವಲು ಪೊಲೀಸ್ ಠಾಣೆಯ ಉಪನಿರೀಕ್ಷಕ ಸುಬ್ರಹ್ಮಣ್ಯ ಹರ್ಕೇರಿ ಮಾತನಾಡಿದರು. ಲಯನ್ಸ್ ಕ್ಲಬ್‌ನ ಅಧ್ಯಕ್ಷ ವಿವೇಕಾನಂದ ಪೂಜಾರಿ, ಕರಾವಳಿ ಕಾವಲು ಪೊಲೀಸ್ ಠಾಣೆಯ ಎಎಸ್‌ಐ ಭಾಸ್ಕರ್ ಮತ್ತು ಸಿಬ್ಬಂದಿ, ಕೆಎನ್‌ಡಿ ಸಿಬ್ಬಂದಿ ಹಾಗೂ ತ್ರಾಸಿ ಎಸ್‌ಎಲ್‌ಆರ್‌ಎಂ ಘಟಕದ ಸಿಬ್ಬಂದಿ ಉಪಸ್ಥಿತರಿದ್ದರು.

**2 ವಾರ ಸ್ವಚ್ಛತಾ ಕಾರ್ಯ**

**ಅನುಪಯುಕ್ತ ಪ್ಲಾಸ್ಟಿಕ್, ಎಲೆಕ್ಟ್ರಾನಿಕ್ ವಸ್ತುಗಳನ್ನು ಬೀದಿ ಬದಿ ಎಸೆಯುವುದರಿಂದ ಪರಿಸರ ಮಾಲಿನ್ಯ ಆಗುವುದಲ್ಲದೇ, ಅವು ಸಮುದ್ರ ತಲುಪಿ ಜಲಚರಗಳ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತದೆ. ಈ ನಿಟ್ಟಿನಲ್ಲಿ ಕೇಂದ್ರ, ರಾಜ್ಯ ಸರಕಾರದ ನಿರ್ದೇಶನದಂತೆ 2 ವಾರಗಳ ಕಾಲ ಸ್ವಚ್ಛತಾ ಕಾರ್ಯವನ್ನು ಜಿಲ್ಲೆಯಾದ್ಯಂತ ಹಮ್ಮಿಕೊಳ್ಳಲಾಗುವುದು.**

**■ ಡಾ.ಕೆ. ವಿದ್ಯಾಕುಮಾರಿ, ಜಿಲ್ಲಾಧಿಕಾರಿ, ಜಿಲ್ಲಾಧಿಕಾರಿ**

Hosa Diganta, Date:23/09/24, p. no - 04